ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 21 ನೇ ಸೆಪ್ಟೆಂಬರ್, 2020

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿರುವ ಪ್ರಸ್ತುತ ಕಾಮಗಾರಿಗಳ ಬಗ್ಗೆ

ಶ್ರೀ ಪ್ರಕಾಶ್ ಕೆ ರಾಥೋಡ್(ನಾಮನಿರ್ದೇಶನ ಹೊಂದಿದವರು) -

79 (32) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಪ್ರಸ್ತುತ ಚಾಲ್ತಿಯಲ್ಲಿರುವ ಕಾಮಗಾರಿಗಳಾವುವು; (ಜಿಲ್ಲಾವಾರು ವಿವರ ನೀಡುವುದು)

(ಆ) ಈ ಕಾಮಗಾರಿಗಳ ನಿರ್ವಹಣೆಯನ್ನು ಯಾವ ಸಂಸ್ಥೆಗೆ ವಹಿಸಲಾಗಿದೆ ; ಇದಕ್ಕೆ ನಡೆಸಿದ ಟೆಂಡರ್ ಪ್ರಕ್ರಿಯೆಯ ಸಂಪೂರ್ಣ ಮಾಹಿತಿ ನೀಡುವುದು;

(ಇ) ಕಾಮಗಾರಿ ಗುತ್ತಿಗೆ ಪಡೆದ ಗುತ್ತಿಗೆದಾರರು ಸಂಸ್ಥೆಗೆ ಮರು ಗುತ್ತಿಗೆ ನೀಡಲು ಸರ್ಕಾರದಲ್ಲಿ ಅವಕಾಶ ಕಲ್ಪಿಸಲಾಗಿದೆಯೇ; ಇದ್ದಲ್ಲಿ, ಆದೇಶದ ಪ್ರತಿಯೊಂದಿಗೆ ಮಾಹಿತಿ ನೀಡುವುದು;

(ಈ) ಕಾಮಗಾರಿಗಳನ್ನು ಪೂರ್ಣಗೊಳಿಸಲು ಇರುವ ಕಾಲಮಿತಿಯೇನು; ಕಾಮಗಾರಿ ವಿಳಂಬದಿಂದ ಸರ್ಕಾರಕ್ಕೆ ಆಗಿರುವ ನಷ್ಟವೇನು? (ವಿವರ ನೀಡುವುದು)